# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 317 |
| ಉತ್ತರಿಸುವ ದಿನಾಂಕ | 06-12-2023 |
| ಮಾನ್ಯ ಸದಸ್ಯರ ಹೆಸರು | ಶ್ರೀ ರವಿಕುಮಾರ್ ಎನ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರದ ಕಾವೇರಿ ತಂತ್ರಾಂಶ 2.0 ದ ಸರ್ವರ್ ಸಮಸ್ಯೆಯಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ; | ಕಾವೇರಿ-2.0 ತಂತ್ರಾಂಶದ ಅನುಷ್ಠಾನದಿಂದಾಗಿ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಗಳು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಕಾವೇರಿ-2.0 ತಂತ್ರಾಂಶವು ನೂತನ ತಂತ್ರಾಂಶವಾಗಿದ್ದು, ಇದನ್ನು ಜೂನ್-2023ರ ಅಂತ್ಯಕ್ಕೆ ರಾಜ್ಯದ ಎಲ್ಲಾ ಉಪ ನೋಂದಣಿ ಕಛೇರಿಗಳಲ್ಲಿ ಅಳವಡಿಸಲಾಗಿರುತ್ತದೆ. ಈ ತಂತ್ರಾಂಶದಲ್ಲಿ Public Interface ಇರುವುದರಿಂದ ಸಾರ್ವಜನಿಕರು ಆನ್‌ಲೈನ್ ಮುಖಾಂತರ ದಸ್ತಾವೇಜಿನ ನೋಂದಣಿಗೆ ಸಂಬಂಧಿಸಿದ ಶೇ.90ರಷ್ಟು ಕೆಲಸವನ್ನು ಪೂರ್ಣಗೊಳಿಸಿರುತ್ತಾರೆ. ತಂತ್ರಾಂಶದ ಕಾರ್ಯಾಚರಣೆಯಲ್ಲಿ ಸಾರ್ವಜನಿಕರ ಪಾತ್ರ ಹೆಚ್ಚಾಗಿರುವುದರಿಂದ ಪ್ರಾರಂಭದ ದಿನಗಳಲ್ಲಿ ತಂತ್ರಾಂಶವನ್ನು ಉಪಯೋಗಿಸುವಲ್ಲಿ ಸಾರ್ವಜನಿಕರಿಗೆ ಕೆಲವು ಸಮಸ್ಯೆಗಳು ಕಂಡುಬಂದಿದ್ದು, ಅವುಗಳನ್ನು ಕಾಲಕ್ರಮೇಣ ಪರಿಹರಿಸಲಾಗಿರುತ್ತದೆ. ತಂತ್ರಾಂಶದ ಬಳಕೆಯಲ್ಲಿ ಸಾರ್ವಜನಿಕರು ಎದುರಿಸುವ ಸಮಸ್ಯೆ ಹಾಗೂ ಗೊಂದಲಗಳಿಗೆ ತಕ್ಷಣ ಪರಿಹಾರ ಒದಗಿಸಲು ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ<br><br>1. **ಸಹಾಯವಾಣಿ:** ನೂತನ ತಂತ್ರಾಂಶದಲ್ಲಿ Public Interface ಇರುವುದರಿಂದ ಸಾರ್ವಜನಿಕರು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಎದುರಿಸುವ ಸಮಸ್ಯೆಗಳನ್ನು ವ್ಯವಸ್ಥಿತವಾಗಿ ಪರಿಹರಿಸಲು ಸಕಾಲ ಕರೆ ಕೇಂದ್ರದ ಸಹಯೋಗದೊಂದಿಗೆ ಇಲಾಖೆಯ ಸಹಾಯ ವಾಣಿಯನ್ನು (080-68265316) ಪ್ರಾರಂಭಿಸಲಾಗಿರುತ್ತದೆ.<br>2. **ಟಿಕೇಟಿಂಗ್ ಟೂಲ್:** ಉಪ ನೋಂದಣಿ ಕಛೇರಿಯಲ್ಲಿನ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಟಿಕೇಟಿಂಗ್ ಟೂಲ್ ಒದಗಿಸಲಾಗಿದ್ದು, ತಂತ್ರಾಂಶದಲ್ಲಿ ಉಂಟಾಗುವ ತಾಂತ್ರಿಕ ಸಮಸ್ಯೆಗಳನ್ನು ಕೂಡಲೇ ಸದರಿ ಟೂಲ್ ಮುಖಾಂತರ ಆನ್‌ಲೈನ್ ನಲ್ಲಿ ತಾಂತ್ರಿಕ ತಂಡಕ್ಕೆ |

ತಿಳಿಸಬಹುದಾಗಿದೆ.

3. **ಸರ್ವೀಸ್ ಡೆಸ್ಕ್:** ಉಪ ನೋಂದಣಿ ಕಛೇರಿಗಳಲ್ಲಿ ನೋಂದಣಿ ಸಮಯದಲ್ಲಿ ಎದುರಾಗುವ ತಾಂತ್ರಿಕ ಸಮಸ್ಯೆಗಳನ್ನು ಕೂಡಲೇ ಪರಿಹರಿಸಲು ಕೇಂದ್ರ ಕಛೇರಿಯಲ್ಲಿ 08 ತಾಂತ್ರಿಕ ಸಿಬ್ಬಂದಿಗಳನ್ನೊಳಗೊಂಡ ಸರ್ವೀಸ್ ಡೆಸ್ಕ್ ಸ್ಥಾಪಿಸಲಾಗಿರುತ್ತದೆ.
4. **ಅಪ್ಲಿಕೇಷನ್ ಸಪೋರ್ಟ್ ಇಂಜಿನಿಯರ್ ಹಾಗೂ ಸಿಸ್ಟಂ ಅಡ್ಮಿನ್:** ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಿಸ್ಟಂ ಅಡ್ಮಿನ್ ಹಾಗೂ ಅಪ್ಲಿಕೇಷನ್ ಸಪೋರ್ಟ್ ಇಂಜಿನಿಯರ್‌ಗಳನ್ನು ನೇಮಿಸಲಾಗಿರುತ್ತದೆ. ಹಾರ್ಡ್‌ವೇರ್‌ನಲ್ಲಿನ ಸಮಸ್ಯೆಗಳನ್ನು ನಿವಾರಿಸಲು ಸಿಸ್ಟಂ ಅಡ್ಮಿನ್‌ಗಳು ಹಾಗೂ ತಂತ್ರಾಂಶದಲ್ಲಿನ ಸಮಸ್ಯೆಗಳನ್ನು ನಿವಾರಿಸಲು ಅಪ್ಲಿಕೇಷನ್ ಸಪೋರ್ಟ್ ಇಂಜಿನಿಯರ್‌ಗಳು ಸಹಕರಿಸುತ್ತಿರುತ್ತಾರೆ.
5. **ಕಾವೇರಿ ಯೋಜನಾ ಉಸ್ತುವಾರಿ ಘಟಕ (KPMU):** ಕೇಂದ್ರ ಕಛೇರಿಯಲ್ಲಿ 05 ತಾಂತ್ರಿಕ ಸದಸ್ಯರನೊಳಗೊಂಡ ಕಾವೇರಿ ಯೋಜನಾ ಉಸ್ತುವಾರಿ ಘಟಕವನ್ನು ಸ್ಥಾಪಿಸಲಾಗಿರುತ್ತದೆ. ಈ ತಂಡವು ತಂತ್ರಾಂಶದ ಅಭಿವೃದ್ಧಿ, ನಿರ್ವಹಣೆ ಮತ್ತು ಕಾರ್ಯಾಚರಣೆಯಲ್ಲಿ ಸೆಂಟರ್ ಫಾರ್ ಸ್ಮಾರ್ಟ್ ಗೌರ್ನೆನ್ಸ್ ಸಂಸ್ಥೆಗೆ ಅಗತ್ಯ ತಾಂತ್ರಿಕ ಮಾಹಿತಿ ಒದಗಿಸುತ್ತಿದೆ.
6. **ಸಿಎಸ್‌ಜಿಯಲ್ಲಿನ L2 Support ವ್ಯವಸ್ಥೆ:** ತಂತ್ರಾಂಶದ ಅಭಿವೃದ್ಧಿಗಾರರಾದ ಸಿಎಸ್‌ಜಿ ಸಂಸ್ಥೆಯು ತಾಂತ್ರಿಕ ಸಮಸ್ಯೆಗಳ ಪರಿಹಾರಕ್ಕಾಗಿ 04 ತಾಂತ್ರಿಕ ಸಿಬ್ಬಂದಿಗಳ L2 Support ವ್ಯವಸ್ಥೆ ಒದಗಿಸಿರುತ್ತದೆ.
7. **ಯುಟ್ಯೂಬ್ ಚಾನಲ್:** ಕಾವೇರಿ ತಂತ್ರಾಂಶದಲ್ಲಿ ವಿವಿಧ ಸೇವೆಗಳನ್ನು ಪಡೆಯಲು ಸಾರ್ವಜನಿಕರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ವಿಡಿಯೋ ಟುಟೋರಿಯಲ್‌ಗಳನ್ನು ಸಿದ್ಧಪಡಿಸಿ ಇಲಾಖೆಯ ಯುಟ್ಯೂಬ್ ಚಾನಲ್ ನಲ್ಲಿ ಒದಗಿಸಲಾಗಿರುತ್ತದೆ.
8. **ಪೋಸ್ಟರ್:** ಕಾವೇರಿ-2 ತಂತ್ರಾಂಶದ ಬಗ್ಗೆ ಮಾಹಿತಿಯನ್ನು ನೀಡಲು ರಾಜ್ಯದ ಎಲ್ಲಾ ನೋಂದಣಿ ಕಛೇರಿಗಳಲ್ಲಿ ಪ್ರದರ್ಶಿಸಲಾಗಿರುತ್ತದೆ.
9. **ತರಬೇತಿ:**

i) ಇಲಾಖೆಯ ಎಲ್ಲಾ ಅಧಿಕಾರಿ / ಸಿಬ್ಬಂದಿಗಳಿಗೆ ಕೇಂದ್ರ ಕಛೇರಿಯ ಗಣಕೀಕರಣ ತರಬೇತಿ ಕೋಶದಲ್ಲಿ ಕಾವೇರಿ-2.0 ತಂತ್ರಾಂಶದ ತರಬೇತಿ ನೀಡಲಾಗಿರುತ್ತದೆ.

| | | |
|---|---|---|
| | | ii) ಸಾರ್ವಜನಿಕರು / ದಸ್ತಾವೇಜು ಬರಹಗಾರರು / ವಕೀಲರು/ ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಯಾಗಾರಗಳನ್ನು ನಡೆಸಿ ತಂತ್ರಾಂಶದ ಬಳಕೆ ಹಾಗೂ ತಂತ್ರಾಂಶದ ಮೂಲಕ ಸೇವೆಗಳನ್ನು ಪಡೆಯುವ ಬಗ್ಗೆ ಮಾಹಿತಿ ನೀಡಲಾಗಿರುತ್ತದೆ. |
| ಆ | ಪದೇ ಪದೇ ಕಾವೇರಿ ತಂತ್ರಾಂಶದಲ್ಲಿ ಸಮಸ್ಯೆ ಎದುರಾಗಲು ಕಾರಣವೇನು; ಯಾವ ಕಾಲಮಿತಿಯೊಳಗೆ ಈ ಸಮಸ್ಯೆಗಳನ್ನು ಪರಿಹರಿಸಲಾಗುವುದು? | ಕಾವೇರಿ-2.0 ತಂತ್ರಾಂಶವು ನೂತನ ತಂತ್ರಾಂಶವಾಗಿದ್ದು, ಪ್ರಾರಂಭದ ದಿನಗಳಲ್ಲಿ ತಂತ್ರಾಂಶದ ಕಾರ್ಯಾಚರಣೆಯಲ್ಲಿ ಕೆಲವೊಂದು ಸಮಸ್ಯೆಗಳು ಕಂಡುಬಂದಿದ್ದು, ಅವುಗಳನ್ನು ಪರಿಹರಿಸಲಾಗಿರುತ್ತದೆ. ಕಾವೇರಿ-2.0 ತಂತ್ರಾಂಶವು ಇತರೆ ಇಲಾಖೆಗಳ ತಂತ್ರಾಂಶಗಳಾದ ಮೋಜಣಿ, ಇ-ಸ್ವತ್ತು, ಇ-ಆಸ್ತಿ, ಸಕಾಲ ಮತ್ತು ಖಜಾನೆ-2 ತಂತ್ರಾಂಶಗಳೊಂದಿಗೆ ಸಂಯೋಜನೆಯಾಗಿದ್ದು, ಈ ತಂತ್ರಾಂಶಗಳಲ್ಲಿ ಸಮಸ್ಯೆಗಳು ಉಂಟಾದಲ್ಲಿ ಕಾವೇರಿ-2.0 ತಂತ್ರಾಂಶದಲ್ಲಿನ ದಸ್ತಾವೇಜಿನ ನೋಂದಣಿಗೆ ಪರಿಣಾಮ ಬೀರುತ್ತದೆ. ಈ ತಂತ್ರಾಂಶದಲ್ಲಿ ಪ್ರತಿದಿನ 11,000 ರಿಂದ 12,000 ದಸ್ತಾವೇಜುಗಳು ನೋಂದಣಿಯಾಗಿದ್ದು, ದಿನಾಂಕ: 27-09-2023 ರಂದು ಒಂದೇ ದಿನದಲ್ಲಿ ಒಟ್ಟು 26,000 ದಸ್ತಾವೇಜುಗಳು ನೋಂದಣಿಯಾಗಿರುತ್ತದೆ. |

ಕಂಇ/228/ಎಂಎನ್ಎಸ್ಎ/2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು